ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

1) 219

2) ಇಲ್ಲ

3) ಇಂತಹ ವಿಚಾರ ಸರ್ಕಾರದ ಪರಿಶೀಲನೆಯಲ್ಲಿ ಇಲ್ಲ.

ರಾಯಚೂರಿನ ರಾಜೀವ್ ಗಾಂಧಿ ಸ್ಮಾರಕ ಆಸ್ಪತ್ರೆಯನ್ನು ಸ್ವಾಯುತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವ ಕುರಿತು.

2755 (3287) ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರಿನ ರಾಜೀವ್ ಗಾಂಧಿ ಸ್ಮಾರಕ ಆಸ್ಪತ್ರೆಯನ್ನು ಸ್ವಾಯುತ್ತ ಸಂಸ್ಥೆಯನ್ನಾಗಿ ಪರಿವರ್ತಿಸಲು ಡಾ॥ ಗುಂಡಪ್ಪನವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುವುದು ನಿಜವಲ್ಲವೆ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಎ. ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಒಪೆಕ್ (OPEC) ನೆರವಿನ ರಾಯಚೂರುಆಸ್ಪತ್ರೆಯಲ್ಲಿ ಚಿಕಿತ್ಸಾ ಸೌಲಭ್ಯಗಳನ್ನು ಸ್ಥಾಪಿಸಲು ಸರ್ಕಾರ ಹಾಗೂ ಇತರ ಸಂಸ್ಥೆಗಳ ಸಹಯೋಗದೊಂದಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸೂಕ್ತ ಶಾಸನಗಳು ಮತ್ತು ವಿಧಿವಿಧಾನಗಳನ್ನು ಮಂಡಿಸಲು ಡಾ॥ ಗುಂಡಪ್ಪನವರನ್ನು ವಿಶೇಷಾಧಿಕಾರಿ ಯೆಂದು ನೇಮಿಸಲಾಗಿದೆ.

ಆ) ಈಗ ಸರ್ಕಾರವು ಈ ಆಸ್ಪತ್ರೆಯ ನಿರ್ವಹಣಾ ಅಗತ್ಯಗಳನ್ನು ಹಾಗೂ ಇದನ್ನು ಸ್ವಾಯುತ್ತ ಸಂಸ್ಥೆಯನ್ನಾಗಿ ಪರಿವರ್ತಿಸುವ ಸಾಧ್ಯತೆಯ ಬಗ್ಗೆ ಪರಿಶೀಲಿಸಲು ಒಂದು ಕಾರ್ಯ ಯೋಜನಾ ಸಮಿತಿಯನ್ನು (Action -Plan Committee) ರಚಿಸಿದೆ.

ಬೋಧಕ ಆಸ್ಪತ್ರೆಗಳಿಗೆ ಉಪಕರಣಗಳ ಖರೀದಿ.

2756 (3289) ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಸರ್ಕಾರಿ ಬೋಧಕ ಆಸ್ಪತ್ರೆಗಳಲ್ಲಿ ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾದವರ ನಿಯಮದ ಪ್ರಕಾರ ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಸೌಲಭ್ಯ ಒದಗಿಸಲು 2000-2001ನೇ ಸಾಲಿನಲ್ಲಿ ಖರೀದಿಸಲು ಉದ್ದೇಶಿಸಿರುವ ಉಪಕರಣಗಳು ಯಾವುವು?

ಆ) ಇದಕ್ಕಾಗಿ ಖರ್ಚು ಮಾಡಲಿರುವ ಹಣವೆಷ್ಟು?